ಈ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಗದುಗಿನಲ್ಲಿ ಹೊಸ ಪ್ರಾದೇಶಿಕ ಕಾರ್ಯಾಗಾರ ಮತ್ತು ಆಧುನಿಕ ಬಸ್ ನಿಲ್ದಾಣವನ್ನು ನಿರ್ಮಿಸಲು ಸೂಕ್ತವಾದ 15 ಎಕರೆ ನಿವೇಶನವನ್ನು ಒದಗಿಸಲು ನಗರ ಸಭೆಯವರನ್ನು ಕೋರಲಾಗಿದೆ.

ವಿಷಯ:- ಭೂತನಾಳ ಕೆರೆಯ ಸುತ್ತಮುತ್ತಲಿನ ಪ್ರದೇಶಗಳ ಅತಿಕ್ರಮಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 238 (49)

ಶ್ರೀ ಬಿ.ಆರ್.ಪಾಟೀಲ್ (ಗದಗ್):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ವಿಜಾಪುರ ನಗರಕ್ಕೆ ನೀರು ಪೂರೈಸುವ ಭೂತನಾಳ ಕೆರೆಯ ಸುತ್ತಮುತ್ತಲಿನ ರೈತರಿಂದ ಅಕ್ರಮಿಸಲ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು? (ಅತಿಕ್ರಮಿಸಿದವರ ಹೆಸರುಗಳನ್ನು ನೀಡುವುದು)

ಇ) ಕೆರೆಯ ಸುತ್ತಮುತ್ತ ಕೊಳವೆ ಬಾವಿಗಳನ್ನು ಹಾಕಿ ತಮ್ಮ ಹೊಲಗಳಿಗೆ ನೀರಾವರಿ ಮಾಡಿಕೊಂಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ? ಬಂದಿದ್ದರೆ ಸದರಿ ಕೊಳವೆ ಬಾವಿಗಳ ಮಾಲೀಕರ ಹೆಸರುಗಳನ್ನು ನೀಡುವುದು.

ಈ) ಇದನ್ನು ತಡೆಗಟ್ಟಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಸಚಿವರು):-

ಅ) ಭೂತನಾಳ ಕೆರೆಯ ಸುತ್ತಮುತ್ತಲಿನ ಪ್ರದೇಶದ ಯಾವುದೇ ರೈತರಿಂದ ಅತಿಕ್ರಮಣವಾಗಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ವಿಷಯ:- ಮೈಸೂರಿನಲ್ಲಿರುವ ಅಂಧರ ಕೈಗಾರಿಕಾ ತರಬೇತಿ ಕೇಂದ್ರದ ಸಿಬ್ಬಂದಿ ಸೇವಾ ಭದ್ರತೆ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 240 (770)

ಶ್ರೀಮತಿ ಪ್ರಮೀಳಾ ನೇಸರ್ಗಿ (ಚಾಮರಾಜಪೇಟೆ):- ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮೈಸೂರಿನ ಅಂಧರ ಕೈಗಾರಿಕಾ ತರಬೇತಿ ಕೇಂದ್ರಕ್ಕೆ ನೇಮಕಗೊಂಡಿರುವ

ಸಿಬ್ಬಂದಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಮೂಲಕ ಆಯ್ಕೆಗೊಳಪಟ್ಟಿರುವ ಸಂಗತಿ ನಿಜವಲ್ಲವೇ?

ಆ) ಸದರಿ ಸಂಸ್ಥೆಯ ಆಡಳಿತ ವರ್ಗದವರು ಏಕಾಏಕಿಯಾಗಿ ಈ ಸಂಸ್ಥೆಯನ್ನು ನಡೆಸಲು ಸಾಧ್ಯವಿಲ್ಲವೆಂದು ಅದನ್ನು ಸರ್ಕಾರದ ವಶಕ್ಕೆ ಹಿಂತಿರುಗಿಸುವುದಾಗಿಯೂ ಹಾಗೂ ಅದರ ಪರಿಣಾಮ ಹಾಲಿ ಇರುವ ಸಿಬ್ಬಂದಿಯನ್ನು ಸೇವೆಯಿಂದ ತೆಗೆದುಹಾಕುವುದಾಗಿ ಬೆದರಿಕೆ ಹಾಕುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ದಿಸೆಯಲ್ಲಿ ಅಂಧರ ಸದರಿ ಸಿಬ್ಬಂದಿಗಳಿಗೆ ನೌಕರಿ ಭದ್ರತೆಯನ್ನು ನೀಡಲು ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳೇನು?

ಶ್ರೀಮತಿ ವಿಮಲಬಾಯಿ ಜಗದೇವ್‌ರಾವ್ ದೇಶ್‌ಮುಖ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು):-

ಅ) ಈ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ನೇಮಕ ಮಾಡುವಾಗ ರಾಷ್ಟ್ರೀಯ ಅಂಧರ ಸಂಸ್ಥೆ, ಬೆಂಗಳೂರುರವರು ಉದ್ಯೋಗ ವಿನಿಮಯ ಕೇಂದ್ರದಿಂದ ಅರ್ಜ ಅಭ್ಯರ್ಥಿಗಳ ಪಟ್ಟಿ ತರಿಸಿಕೊಂಡಿರುತ್ತಾರೆ.

ಆ) ರಾಷ್ಟ್ರೀಯ ಅಂಧರ ಸಂಸ್ಥೆ, ಬೆಂಗಳೂರುರವರು ಈ ತರಬೇತಿ ಕೇಂದ್ರಗಳನ್ನು ಆಡಳಿತಾತ್ಮಕ ಕಾರಣಗಳಿಗಾಗಿ ನಡೆಸಲು ಸಾಧ್ಯವಿರುವುದಿಲ್ಲವೆಂದು ಕಳೆದ ಒಂದೆರಡು ವರ್ಷಗಳಲ್ಲಿ ಸರ್ಕಾರಕ್ಕೆ ಮುಂಚಿತವಾಗಿಯೇ ತಿಳಿಸುತ್ತಾ ಬಂದಿದ್ದಾರೆ. ಸಿಬ್ಬಂದಿಗಳನ್ನು ಸೇವೆಯಿಂದ ತೆಗೆದು ಹಾಕುವ ವಿಷಯವು ಸರ್ಕಾರದ ಗಮನಕ್ಕೆ ಬಂದಿಲ್ಲ. ಆದ್ದರಿಂದ ಸದರಿ ಸಿಬ್ಬಂದಿಗಳಿಗೆ ನೌಕರಿ ಭದ್ರತೆ ಒದಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಮುಜರಾಯಿ ಇಲಾಖೆಗೆ ಸೇರಿದ ನೀಲಸಂದ್ರದ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದಲ್ಲಿ ದುರುಪಯೋಗ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 241 (230)

ಶ್ರೀಮತಿ ಪ್ರಮೀಳಾ ನೇಸರ್ಗಿ (ಚಾಮರಾಜಪೇಟೆ):- ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮುಜರಾಯಿ ಇಲಾಖೆಗೆ ಸೇರಿದ ನೀಲಸಂದ್ರದಲ್ಲಿನ ಶ್ರೀಧರ್ಮರಾಯಸ್ವಾಮಿ ದೇವಸ್ಥಾವದ ಆಡಳಿತವು ಧರ್ಮದರ್ಶಿಗಳಿಂದ ದುರುಪಯೋಗವಾಗುತ್ತಿರುವುದು ನಿಜವೇ?

ಆ) ಇಲಾಖೆಯ ನಿಯಂತ್ರಣದಿಂದ ದೇವಸ್ಥಾನದ ಆಡಳಿತವನ್ನು ತಪ್ಪಿಸಲು ಧರ್ಮದರ್ಶಿಗಳು ಪ್ರಯತ್ನಿಸುತ್ತಿರುವುದು ನಿಜವೇ?

ಇ) ಮೇಲ್ಕಂಡ ದೇವಾಲಯದಲ್ಲಿ ಬೃಹತ್ ಪ್ರಮಾಣದಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?